ಕರ್ನಾಟಕ ಸರ್ಕಾರ
ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ
2ನೇ ಮಹಡಿ, 3ನೇ ಹಂತ, ಬಹುಮಹಡಿಗಳ ಕಟ್ಟಡ, ಬೆಂಗಳೂರು 560001
ದೂರವಾಣಿ ಸಂಖ್ಯೆ:080-22342163, ಇ-mail: karnregs@gmail.com

ಸಂಖ್ಯೆ: ಗ್ರಾಅಪ:13;ಉಖಾಯೋ:2020

ದಿನಾಂಕ: 22.01.2020

## ಅನಧಿಕೃತ ಟಿಪ್ಪಣಿ

ವಿಷಯ: ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಖಾಲಿ ಇರುವ ಓಂಬುಡ್ಸ್‌ಮನ್ ಹುದ್ದೆಗಳ ಆಯ್ಕೆಗಾಗಿ ಅರ್ಜಿಗಳನ್ನು ಆಹ್ವಾನಿಸಿರುವ ಪ್ರಕಟಣೆಯನ್ನು ವೆಬ್ ಸೈಟ್‌ನಲ್ಲಿ ಆರೋಹಿಸುವ ಬಗ್ಗೆ.

*****

ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಖಾಲಿ ಇರುವ 11 ಜಿಲ್ಲಾ ಓಂಬುಡ್ಸ್‌ಮನ್ ನೇಮಕಾತಿಗೆ ಅರ್ಜಿಗಳನ್ನು ಆಹ್ವಾನಿಸಿರುವ ಪತ್ರಿಕಾ ಪ್ರಕಟಣೆಯ ಪ್ರತಿಯನ್ನು ಲಗತ್ತಿಸಿದೆ. ಸದರಿ ಪ್ರಕಟಣೆಯನ್ನು ಇಲಾಖೆಯ ವೆಬ್‌ಸೈಟ್ www.rdpr.kar.nic.in ಮತ್ತು www.karnregs.kar.nic.in ನಲ್ಲಿ ಆರೋಹಿಸಿ ಸಾರ್ವಜನಿಕರ ವೀಕ್ಷಣೆಗೆ ಅವಕಾಶ ಮಾಡುವಂತೆ ಕೋರಿದೆ.

ಜಂಟಿ ನಿರ್ದೇಶಕರು(ಆಡಳಿತ)
ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಗೆ,
ವಿಶೇಷಾಧಿಕಾರಿ, ಗಣಕ ಯಂತ್ರಕೋಶ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಕರ್ನಾಟಕ ಸರ್ಕಾರ
ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ
2ನೇ ಮಹಡಿ, 3ನೇ ಹಂತ, ಬಹುಮಹಡಿಗಳ ಕಟ್ಟಡ, ಬೆಂಗಳೂರು 560001
ದೂರವಾಣಿ ಸಂಖ್ಯೆ:080-22342163, E-mail: karnregs@gmail.com

ಸಂಖ್ಯೆ: ಗ್ರಾಅಪ:13:ಉಖಾಯೋ:2020

ದಿನಾಂಕ: 21-01-2020

**ಪತ್ರಿಕಾ ಪ್ರಕಟಣೆ**

ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯ ಅನುಷ್ಠಾನದ ಸಂಬಂಧದಲ್ಲಿ ಸ್ವೀಕೃತವಾಗುವ ದೂರುಗಳ ವಿಲೇವಾರಿ ಮತ್ತು ಕುಂದುಕೊರತೆ ನಿವಾರಣೆಗಾಗಿ ಈ ಕೆಳಕಂಡ ಜಿಲ್ಲೆಗಳಿಗೆ ಒಂಬುಡ್ಸ್‌ಮನ್‌ರವರನ್ನು ಆಯ್ಕೆ ಮೂಲಕ ನೇಮಿಸಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ.

| | |
|---|---|
| ಒಂಬುಡ್ಸ್‌ಮನ್ ಹುದ್ದೆಗಳಿರುವ ಜಿಲ್ಲೆಗಳು: | **ಉತ್ತರ ಕನ್ನಡ, ರಾಯಚೂರು, ಯಾದಗಿರಿ, ಕಲಬುರಗಿ, ಚಿಕ್ಕಬಳ್ಳಾಪುರ, ತುಮಕೂರು, ಹಾವೇರಿ, ಗದಗ ಬಾಗಲಕೋಟೆ, ಬಳ್ಳಾರಿ ಮತ್ತು ಬೆಂಗಳೂರು (ಗ್ರಾ/ನಗರ)** |

**ಅರ್ಹತೆಗಳು:**

1. ಈ ಕೆಳಕಂಡ ಯಾವುದಾದರೊಂದು ಕ್ಷೇತ್ರದಲ್ಲಿ ಕಡೆಯ ಪಕ್ಷ 10 ವರ್ಷಗಳ ಸೇವಾನುಭವ ಹೊಂದಿರಬೇಕಾಗಿರುತ್ತದೆ.
   **ಅ) ಸಾರ್ವಜನಿಕ ಆಡಳಿತ**
   **ಆ) ಕಾನೂನು**
   **ಇ) ಶೈಕ್ಷಣಿಕ ಕ್ಷೇತ್ರ**
   **ಈ) ಸಮಾಜ ಸೇವೆ/ಮ್ಯಾನೇಜ್‌ಮೆಂಟ್**

1. ಸಾರ್ವಜನಿಕರೊಂದಿಗೆ/ಸಮುದಾಯದ ಸಂಸ್ಥೆಗಳಲ್ಲಿ ಕೆಲಸ ನಿರ್ವಹಿಸಿದ ಅನುಭವವು ಒಂದು ಕಡ್ಡಾಯ ಅರ್ಹತೆಯಾಗಿರುತ್ತದೆ.
2. ಅರ್ಜಿ ಸಲ್ಲಿಸುವವರು ಯಾವುದೇ ರಾಜಕೀಯ ಪಕ್ಷದ ಮತ್ತು ನಿಷೇಧಿತ ಸಂಘ ಸಂಸ್ಥೆಯ ಸದಸ್ಯರಾಗಿರಬಾರದು.
3. ಕಾಮಗಾರಿ ತಪಾಸಣೆ, ಕ್ಷೇತ್ರ ಭೇಟಿ/ ವೀಕ್ಷಣೆ ಕೆಲಸಗಳಿಗೆ ಜಿಲ್ಲೆಯ ಗ್ರಾಮೀಣ ಭಾಗದಲ್ಲಿ ಪ್ರವಾಸ ಕೈಗೊಳ್ಳಲು ಸಮರ್ಥರಿರಬೇಕು.
4. ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕಕ್ಕೆ ಗರಿಷ್ಠ ವಯಸ್ಸು 66 ವರ್ಷಗಳನ್ನು ಮೀರಿರಬಾರದು.
5. ನೇಮಕಾತಿಯು ಮೊದಲಿಗೆ 2 ವರ್ಷಗಳ ಅವಧಿಯದಾಗಿರುತ್ತದೆ. ಆದರೆ ಕಾರ್ಯನಿರ್ವಹಣೆಯು ಅತೃಪ್ತಿಕರವಾಗಿ ಕಂಡು ಬಂದಲ್ಲಿ ಅವಧಿಗೆ ಮುನ್ನವೇ ಹುದ್ದೆಯಿಂದ ಬಿಡುಗಡೆ ಮಾಡಲಾಗುವುದು.
6. ಕೇಂದ್ರ/ರಾಜ್ಯ ಸರ್ಕಾರವು ಹೊರಡಿಸುವ ಆದೇಶಗಳ ಅನುಸಾರ ಸಂಭಾವನೆ, ಸಿಟ್ಟಿಂಗ್ ಫೀಜು ನೀಡಲಾಗುವುದು. ಪ್ರಸ್ತುತ ಮಾಸಿಕ ರೂ.10000/- ಗೌರವಧನ ಹಾಗೂ ಪ್ರತಿ ಸಿಟ್ಟಿಂಗ್‌ಗೆ ರೂ.1000/- ದಂತೆ ಗರಿಷ್ಠ ರೂ.20000/- ಗಳ ಮಿತಿಗೊಳಪಟ್ಟು ಸಿಟ್ಟಿಂಗ್ ಫೀಜು ನೀಡಲಾಗುತ್ತಿದೆ.

ಜಿಲ್ಲಾ ಮಟ್ಟದಲ್ಲಿ ಒಂಬುಡ್ಸ್‌ಮನ್‌ಗಳಾಗಿ ಕಾರ್ಯನಿರ್ವಹಿಸಲು ಆಸಕ್ತಿ ಇರುವ ವ್ಯಕ್ತಿಗಳು ಇಲಾಖೆಯ ವೆಬ್‌ಸೈಟ್ **www.rdpr.kar.nic.in** ನಲ್ಲಿ ನಿಗದಿತ ಅರ್ಜಿನಮೂನೆಯನ್ನು ಅವರೋಹಣ (download) ಮಾಡಿಕೊಂಡು, ತಮ್ಮ ವ್ಯಕ್ತಿತ್ವ ಪರಿಚಯದ, ಕನಿಷ್ಠ 10 ವರ್ಷಗಳ ಕಾರ್ಯನಿರ್ವಹಣೆ ಅನುಭವದ ಮಾಹಿತಿಗೆ ಪೂರಕವಾದ ದಾಖಲೆಗಳೊಂದಿಗೆ ಅರ್ಜಿಯು **ದಿನಾಂಕ: 10-02-2020** ರೊಳಗೆ ತಲುಪುವಂತೆ ಖುದ್ದಾಗಿ / ಅಂಚೆ ಮೂಲಕ ಆಯುಕ್ತರು ಗ್ರಾಮೀಣಾಭಿವೃದ್ಧಿ, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿ ಕಟ್ಟಡ, 3ನೇ ಹಂತ, 2ನೇ ಮಹಡಿ, ಅಂಬೇಡ್ಕರ್ ವೀಧಿ, ಬೆಂಗಳೂರು-560001 ಇವರಿಗೆ ಸಲ್ಲಿಸುವುದು. ನಿಗಧಿ ಪಡಿಸಿದ ದಿನಾಂಕದ ನಂತರ ತಡವಾಗಿ ಸ್ವೀಕೃತವಾಗುವ ಅಥವಾ ಅಪೂರ್ಣ ಮಾಹಿತಿ ಹೊಂದಿರುವ ಅರ್ಜಿಗಳು ಪರಿಗಣಿಸಲ್ಪಡುವುದಿಲ್ಲ. (ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರು (ಆಡಳಿತ), ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ ಇವರನ್ನು ಸಂಪರ್ಕಿಸಬಹುದಾಗಿದೆ, (ದೂರವಾಣಿಸಂಖ್ಯೆ:080-22342163).

ಆಯುಕ್ತರು ಗ್ರಾಮೀಣಾಭಿವೃದ್ಧಿ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

(ಭಾವಚಿತ್ರ)

## ಒಂಬುಡ್ಸ್‌ಮನ್ ನೇಮಕಾತಿಯ ಅರ್ಜಿ ನಮೂನೆ:

| | | |
|---|---|---|
| 1 | ವೈಯಕ್ತಿಕ ಮಾಹಿತಿ ವಿವರ : | |
| 1.1 | ಹೆಸರು : | |
| 1.2 | ವಯಸ್ಸು : (21-01-2020 ದಿನಾಂಕದಲ್ಲಿದ್ದಂತೆ)<br>(ಜನನ ಪ್ರಮಾಣ ಪತ್ರದ ಪ್ರತಿ ಲಗತ್ತಿಸುವುದು) | |
| 1.3 | ಅಂಚೆ ವಿಳಾಸ ಅಥವಾ ಪತ್ರ ವ್ಯವಹಾರದ ವಿಳಾಸ: | |
| 1.4 | ಮೊಬೈಲ್ ಸಂಖ್ಯೆ/ಇ-ಮೇಲ್ ಐಡಿ: | |
| 1.5 | ಖಾಯಂ ವಿಳಾಸ :<br>(ವಾಸಸ್ಥಳದ ರುಜುವಾತು ದಾಖಲಾತಿಯನ್ನು ಲಗತ್ತಿಸುವುದು) | |
| 1.6 | ನೀವು ದೈಹಿಕವಾಗಿ ಮತ್ತು ಮಾನಸಿಕವಾಗಿ ಕ್ಷೇತ್ರಗಳ ಭೇಟಿ ನಡೆಸಲು ಧೃಢಕಾಯರಾಗಿರುವಿರಾ? (ಧೃಢೀಕೃತ ವೈದ್ಯಕೀಯ ಪ್ರಮಾಣ ಪತ್ರ ಲಗತ್ತಿಸುವುದು) | |
| 1.7 | ರಾಜಕೀಯ ಪಕ್ಷದ ಸದಸ್ಯರೇ ?<br>(ಪಬ್ಲಿಕ್ ನೋಟರಿಯಿಂದ ಧೃಢೀಕರಿಸಿದ ವೈಯಕ್ತಿಕ ಪ್ರಮಾಣ ಪತ್ರವನ್ನು ಲಗತ್ತಿಸುವುದು.) | |
| 1.8 | ಅ) ಕ್ರಿಮಿನಲ್ ಪ್ರಕರಣದಲ್ಲಿ ಶಿಕ್ಷೆಗೊಳಗಾಗಿದ್ದೀರಾ/ಆರೋಪ ಪಟ್ಟಿ ದಾಖಲಾಗಿದೆಯೇ ?<br>ಆ) ಇಲಾಖಾ ವಿಚಾರಣೆಯಲ್ಲಿ ದಂಡನೆಗೆ ಒಳಪಟ್ಟಿರುವಿರೇ?/ಯಾವುದೇ ಇಲಾಖಾ ವಿಚಾರಣೆ ಬಾಕಿ ಇದೆಯೇ?<br>(ಪಬ್ಲಿಕ್ ನೋಟರಿಯಿಂದ ಧೃಢೀಕರಿಸಿದ ವೈಯಕ್ತಿಕ ಘೋಷಣಾ ಪ್ರಮಾಣ ಪತ್ರವನ್ನು ಸಲ್ಲಿಸುವುದು) | |
| 1.9 | ಯಾವುದೇ ಸಾಮರ್ಥ್ಯದಲ್ಲಿ ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯನ್ನು ಅನುಷ್ಠಾನಗೊಳಿಸುವ ಹೊಣೆಗಾರಿಕೆ ಹೊಂದಿರುವಿರಾ? | |
| 2 | ವೃತ್ತಿ ಪರ ಮಾಹಿತಿ ವಿವರ : | |
| 2.1 | ಉನ್ನತ ವಿದ್ಯಾರ್ಹತೆ :<br>(ಕನಿಷ್ಠ ವಿದ್ಯಾರ್ಹತೆ: ಅಂಗೀಕೃತ ವಿಶ್ವವಿದ್ಯಾಲಯದಿಂದ ಪದವೀಧರರಾಗಿರತಕ್ಕದ್ದು)<br>(ಸ್ವಯಂ ಧೃಢೀಕರಿಸಿದ ಅಧಿಕೃತ ಪ್ರಮಾಣ ಪತ್ರವನ್ನು ಲಗತ್ತಿಸುವುದು) | |
| 2.2 | ಎಷ್ಟು ವರ್ಷಗಳ ಕೆಲಸದ ಅನುಭವವಿದೆ :<br>(ಸ್ವಯಂ ಧೃಢೀಕರಿಸಿದ ಅಧಿಕೃತ ಪ್ರಮಾಣ ಪತ್ರವನ್ನು ಲಗತ್ತಿಸುವುದು). | |
| 2.3 | ಕ್ಷೇತ್ರ ಮಟ್ಟದ ಅನುಭವ: ಈ ಕೆಳಕಂಡ ಯಾವುದಾದರು ಒಂದು ಕ್ಷೇತ್ರದಲ್ಲಿ ಕನಿಷ್ಠ 10 ವರ್ಷಗಳು ಕಾರ್ಯನಿರ್ವಹಿಸಿರುವ ಅನುಭವ ಇರತಕ್ಕದ್ದು. ಈ ಕುರಿತು ವಿವರವಾದ ಟಿಪ್ಪಣಿ ಹಾಗೂ ಕಾರ್ಯನಿರ್ವಹಿಸಿದ ಅನುಭವಕ್ಕೆ ಸಂಬಂಧಿಸಿದ ಧೃಢೀಕೃತ ದಾಖಲೆಗಳನ್ನು ಕಡ್ಡಾಯವಾಗಿ ಲಗತ್ತಿಸುವುದು.<br>(ಅ) ಸಾರ್ವಜನಿಕ ಆಡಳಿತ<br>(ಆ) ಕಾನೂನು<br>(ಇ) ಶೈಕ್ಷಣಿಕ ಸೇವೆ<br>(ಈ) ಸಮಾಜ ಸೇವೆ /ಮ್ಯಾನೇಜಮೆಂಟ್ | |
| 2.4 | ಈ ಹಿಂದೆ ಕಾರ್ಯನಿರ್ವಹಿಸಿದ್ದ ಗರಿಷ್ಠ ಹುದ್ದೆ/ಸ್ಥಾನ : | |
| 2.5 | ಯಾವುದಾದರೂ ಸೊಸೈಟಿ/ವೃತ್ತಿಕಾಯ ಸಂಸ್ಥೆಯ ಸದಸ್ಯರೇ? ಇದ್ದಲ್ಲಿ ವಿವರಗಳನ್ನು ನೀಡುವುದು : | |
| 2.6 | ನೇಮಕಾತಿ ಬಯಸುವ ಜಿಲ್ಲೆ: ಆದ್ಯತೆ ನಮೂದಿಸುವುದು (ಸಮಿತಿಯ ನಿರ್ಣಯವೇ ಅಂತಿಮ) | 1) 2) 3) 4)----- |
| 3 | ಸ್ವಯಂ ಘೋಷಣೆ: | |

ಮೇಲೆ ಸಲ್ಲಿಸಿರುವ ಮಾಹಿತಿಯು ಸರಿಯಾಗಿದೆಯೆಂದು ಹಾಗೂ ಅಧಿನಿಯಮದ ಪರಿಮಿತಿಯೊಳಗೆ ಮಹಾತ್ಮಗಾಂಧಿ ನರೇಗಾ ಯೋಜನೆಯನ್ನು ಕೇಂದ್ರ ಸರ್ಕಾರವು ಕಾಲಕಾಲಕ್ಕೆ ಹೊರಡಿಸಿದ ಕಾರ್ಯಾಚರಣೆ ಮಾರ್ಗಸೂಚಿಗಳನ್ವಯ ರೂಪಿಸಿರುವ ಎಲ್ಲಾ ಪ್ರಕಾರ್ಯಗಳನ್ನು ಹಾಗೂ ಒಂಬುಡ್ಸಮನ್ ಕುರಿತು ಜಾಹಿರಾತು ಮೂಲಕ ನೀಡಿರುವ ಸೂಚನೆಗಳನ್ನು ಮತ್ತು ಒಂಬುಡ್ಸಮನ್ ಹುದ್ದೆಯು ಅರೆಕಾಲಿಕ ಹುದ್ದೆಯಾಗಿರುವುದನ್ನು ಪೂರ್ಣವಾಗಿ ಅರ್ಥೈಸಿಕೊಂಡಿರುವೆನೆಂದು ಈ ಮೂಲಕ ಘೋಷಿಸಿರುತ್ತೇನೆ.

ದಿನಾಂಕ:

ಸ್ಥಳ:

ಅರ್ಜಿದಾರರ ಹೆಸರು ಮತ್ತು ಸಹಿ: